



ಅರುಣ ಪಿ. ಭಟ್ಟ

# ವಾರಭವಿಷ್ಯ: 14.12.2023ರಿಂದ 20.12.2023ರವರೆಗೆ



**ಮೇಷ**

ವಾರದ ಆರಂಭದಲ್ಲಿ ವೃತ್ತಿ ಜೀವನದಲ್ಲಿ ಕೀರ್ತಿ ಪ್ರತಿಷ್ಠೆಗಳು ಲಭಿಸುತ್ತವೆ. ಇನ್ನು ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವೈಯಕ್ತಿಕ ಜೀವನದಲ್ಲೂ ಉತ್ತಮವಾದ ಸಮಯ ಇದು. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು. ಅದರಲ್ಲೂ ಯಾರ ಜೊತೆಗೆ ಸ್ನೇಹ ಮಾಡಿದ್ದೀರಿ, ಅವರ ಜೊತೆ ಹೇಗೆ ಸಮಯ ಕಳೆಯುತ್ತಿದ್ದೀರಿ ಎಂಬ ಬಗ್ಗೆ ಎಚ್ಚರ ಇರಲಿ. ಶುಭದಿನ 16. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ವೃಷಭ**

ವಾರದ ಆರಂಭದಲ್ಲಿ ದೇವತಾ ಆರಾಧನೆಗೆ ಗಮನ ಹೆಚ್ಚಿರುತ್ತದೆ. ಹಿರಿಯರ ಸೇವೆ ಮಾಡಲು ಬಯಸುವವರಿಗೆ ಅವಕಾಶ ದೊರೆಯಲಿದೆ. ಉನ್ನತ ಶಿಕ್ಷಣ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಮಾಮೂಲಿ ಕೆಲಸ ಕಾರ್ಯಗಳ ಹೊರತಾಗಿ ಇತರ ವಿಚಾರಗಳ ಕಡೆಗೆ ನಿಮ್ಮ ಗಮನ ಹೋಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೇತನದಲ್ಲಿ ಏರಿಕೆಯಾಗುವ ಸಾಧ್ಯತೆ ಇದೆ. ಶುಭದಿನ 20. ಸೌಂದರ್ಯ ಲಹರಿ ಪಠಿಸಿರಿ.



**ಮಿಥುನ**

ವಾರದ ಆರಂಭದಲ್ಲಿ ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ನಿಮ್ಮ ಪ್ರಯತ್ನ ಭವಿಷ್ಯದ ಯಶಸ್ಸಿಗೆ ಸಹಕಾರಿ ಆಗಿರುತ್ತದೆ. ಸಂಗಾತಿ ಜೊತೆಗೆ ನಡೆಸುವ ಮಾತುಕತೆ ಉದ್ವಿಗ್ನತೆಗೆ ಕಾರಣವಾಗಬಹುದು. ಉದ್ಯೋಗ ಸ್ಥಳದಲ್ಲಿ ಕೆಲವು ತಾಂತ್ರಿಕ ಸಮಸ್ಯೆಗಳು ಸೃಷ್ಟಿಯಾಗುತ್ತವೆ. ಇನ್ನು ಇದೇ ಅವಧಿಯಲ್ಲಿ ದೂರ ಪ್ರಯಾಣ ಮಾಡುವ ಸಾಧ್ಯತೆ ಇದೆ. ಶುಭದಿನ 17. ಹನುಮಾನ್ ಚಾಲಿಸ್ ಓದಿರಿ.



**ಕಟಕ**

ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸಂತಸ ಇರುತ್ತದೆ. ಸಂಗಾತಿ ಜೊತೆ ಉತ್ತಮ ಬಾಂಧವ್ಯ ಇರಲಿದೆ. ವ್ಯಾಪಾರದಲ್ಲಿ ಯಶಸ್ಸು ಪಡೆಯಲು ಸಾಕಷ್ಟು ಅವಕಾಶಗಳು ದೊರೆಯಲಿವೆ. ಇದರಿಂದ ಸಂತೋಷ ಹೆಚ್ಚಲಿದೆ. ವಾರದ ಅಂತ್ಯಕ್ಕೆ ಕುಟುಂಬ ಸದಸ್ಯರ ನಡವಳಿಕೆಯಿಂದ ಗೊಂದಲಕ್ಕೆ ಸಿಲುಕಿಕೊಳ್ಳುತ್ತೀರಿ. ಆರೋಗ್ಯದಲ್ಲಿ ಕೂಡ ಏರಿಳಿತಗಳು ಕಾಣಿಸಿಕೊಳ್ಳುತ್ತವೆ. ಶುಭದಿನ 18. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.



**ಸಿಂಹ**

ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಸೃಷ್ಟಿಯಾಗಬಹುದು. ಆದ್ಯತೆ ಮೇಲೆ ಕೆಲಸಗಳನ್ನು ಪೂರೈಸುವುದಕ್ಕೆ ನಿರ್ಧಾರ ಮಾಡುತ್ತೀರಿ. ಈ ತೀರ್ಮಾನದಿಂದ ಭವಿಷ್ಯದಲ್ಲಿ ಅನುಕೂಲವಾಗಲಿದೆ. ಆಹಾರ ನೀರು ಸೇವನೆ ಬಗ್ಗೆ ಹೆಚ್ಚು ಲಕ್ಷ್ಯ ಇರಲಿ. ಹಿರಿಯರಿಗೆ ಮಂಡಿ ನೋವು ಕಾಣಿಸಿಕೊಳ್ಳಬಹುದು. ಶುಭದಿನ 19. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಕನ್ಯಾ**

ಮಗ ಅಥವಾ ಮಗಳ ಏಳ್ಗೆ, ಪ್ರಗತಿಯಿಂದ ಸಂತಸ ಹೆಮ್ಮೆ ಉಂಟಾಗುತ್ತದೆ. ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ ಯಶಸ್ಸು ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಆದಾಯ ಅತ್ಯುತ್ತಮವಾಗಿ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಜೊತೆ ಬಾಂಧವ್ಯ ಗಟ್ಟಿಯಾಗಿರುತ್ತದೆ. ಸಂಬಂಧಿಕರ ಆಹ್ವಾನದ ಮೇರೆಗೆ ಶುಭ ಕಾರ್ಯಗಳಲ್ಲಿ ಭಾಗವಹಿಸಲಿದ್ದೀರಿ. ಶುಭದಿನ 16. ವಿಷ್ಣು ಸಹಸ್ರನಾಮ ಪಠಿಸಿರಿ.



**ತುಲಾ**

ತಂತ್ರಜ್ಞಾನ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಯಶಸ್ಸಿದೆ. ಉದ್ಯಮಿಗಳು ವ್ಯಾಪಾರಸ್ಥರಿಗೆ ಉತ್ತಮ ಸಮಯ. ಈ ಅವಧಿಯಲ್ಲಿ ಆರೋಗ್ಯವೂ ಉತ್ತಮವಾಗಿರುತ್ತದೆ. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ. ವಾರದ ಮಧ್ಯ ಭಾಗದಲ್ಲಿ ಕೆಲಸ ಕಾರ್ಯಗಳು ವಿಪರೀತ ವೇಗವಾಗಿ ಪೂರ್ಣಗೊಳ್ಳುತ್ತವೆ. ಶುಭದಿನ 17. ಲಿಂಗಾಷ್ಟಕ ಪಠಿಸಿರಿ.



**ವೃಶ್ಚಿಕ**

ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಕೌಟುಂಬಿಕ ಜೀವನದಲ್ಲೂ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಮಾಹಿತಿ ಹಾಗೂ ಸಂವಹನ ಕ್ಷೇತ್ರದಲ್ಲಿ ಇರುವವರಿಗೆ ಗೌರವ ಹೆಚ್ಚಾಗಲಿದೆ. ಜತೆಗೆ ಯಶಸ್ಸು ನಿಮ್ಮ ಪಾಲಿಗೆ ಸಿಗಲಿದೆ. ಹಿರಿಯರಿಗೆ ಆರೋಗ್ಯ ಸಮಸ್ಯೆಗಳು ಕಾಡಬಹುದು. ಆದರೆ ವಾರಾಂತ್ಯದ ಹೊತ್ತಿಗೆ ಚೇತರಿಕೆ ಕಾಣಿಸಿಕೊಳ್ಳಲಿದೆ. ಶುಭದಿನ 16. ಚಂಡಿ ಪಾರಾಯಣ ಮಾಡಿರಿ.



**ಧನಸ್ಸು**

ವಾರದ ಶುರುವಿನಲ್ಲಿ ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ಈಗಾಗಲೇ ವ್ಯಾಜ್ಯಗಳು ಇದ್ದಲ್ಲಿ ಅವುಗಳನ್ನು ನಿವಾರಿಸಿಕೊಳ್ಳಲು ಸಫಲರಾಗುತ್ತೀರಿ. ವಾಸ್ತವದಲ್ಲಿ ಸಂತೋಷಪಡುವುದಕ್ಕೆ ಬೇಕಾದ ಸೌಕರ್ಯಗಳನ್ನು ಪಡೆಯಲಿದ್ದೀರಿ. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲಕರವಾದ ಸನ್ನಿವೇಶ. ಬಡ್ತಿ ದೊರೆಯುವ ಅವಕಾಶಗಳು ಹೆಚ್ಚಿವೆ. ಶುಭದಿನ 16. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.



**ಮಕರ**

ವಾರದ ಶುರುವಿನಲ್ಲಿ ವೃತ್ತಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡುವ ಕಡೆಗೆ ನಿಮ್ಮ ಗಮನ ಇರುತ್ತದೆ. ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಭೂಮಿ ಖರೀದಿ ಬಗ್ಗೆ ಆಸಕ್ತರಾಗಿದ್ದಲ್ಲಿ ನಿಮ್ಮ ಪ್ರಯತ್ನ ಆರಂಭಿಸುವುದಕ್ಕೆ ಇದು ಸೂಕ್ತ ಸಮಯ. ದೈಹಿಕ ಬಾಧೆಗಳು ನಿಮ್ಮನ್ನು ಕಾಡಬಹುದು. ಶುಭದಿನ 18. ನವದುರ್ಗಾ ಆರಾಧನೆ ಮಾಡಿರಿ.



**ಕುಂಭ**

ನಿಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಅಗತ್ಯವಾದ ವೇದಿಕೆಯನ್ನು ಸಿದ್ಧ ಮಾಡಿಕೊಳ್ಳುತ್ತೀರಿ. ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ವ್ಯಾಪಾರ ಒಪ್ಪಂದವನ್ನು ಪೂರ್ಣಗೊಳಿಸುವ ಸಲುವಾಗಿ ಹೆಚ್ಚು ಹಣ ಮೀಸಲಿಡಬೇಕಾಗುತ್ತದೆ. ಆರೋಗ್ಯ ಸಮಸ್ಯೆಗಳು ಸ್ವಲ್ಪಮಟ್ಟಿಗೆ ಕಾಡಬಹುದು. ಸಂಬಂಧದಲ್ಲಿ ಬಾಂಧವ್ಯ ಗಟ್ಟಿಯಾಗಲಿದೆ. ಶುಭದಿನ 18. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.



**ಮೀನ**

ವಾರದ ಶುರುವಿನಲ್ಲಿ ಕೆಲಸ ಕಾರ್ಯಗಳನ್ನು ಪೂರೈಸಲು ಉದ್ಯೋಗ ಸ್ಥಳದಲ್ಲಿ ಶ್ರಮಿಸಲಿದ್ದೀರಿ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಂಗಾತಿ ಜೊತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವಾರದ ಮಧ್ಯ ವ್ಯವಹಾರದಲ್ಲಿ ಬಿಕ್ಕಟ್ಟು ಎದುರಾಗಲಿದೆ. ವಾರಾಂತ್ಯಕ್ಕೆ ಆರೋಗ್ಯವು ಉತ್ತಮವಾಗಿರುತ್ತದೆ. ವೈವಾಹಿಕ ಜೀವನವು ಸಂತುಷ್ಟವಾಗಿರುತ್ತದೆ. ಶುಭದಿನ 16. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.